All India Radio: Bangalore
National Bulletin In Kannada
26.11.2026 1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.11.2026 1.10 p.m.
<><><><>

ಮುಖ್ಯಾಂಶಗಳು

1. ಕರ್ನಾಟಕ ಸೇರಿ ದೇಶಾದ್ಯಂತ ಇಂದು ಸಂವಿಧಾನ ದಿನ ಆಚರಣೆ; ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಶುಭಾಶಯ
2. ಮುಂಬೈ ಉಗ್ರರ ದಾಳಿಗೆ ೧೮ ವರ್ಷ: ಹುತಾತ್ಮರಿಗೆ ದೇಶದ ಗೌರವ ನಮನ
3. ೫೭ನೇ ಚಲನಚಿತ್ರೋತ್ಸವದ ೭ನೇ ದಿನಕ್ಕೆ ಉತ್ಸಾಹಭರಿತ ಚಾಲನೆ; ಇಂದು 'ಕಾಂತಾರ: ಅಧ್ಯಾಯ ೧' ಪ್ರದರ್ಶನ
4. ಪುರುಷರ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್ ಕ್ರಿಕೆಟ್ ಟೂರ್ನಿ: ಮೊದಲ ಸೆಮಿಫೈನಲ್ ನಲ್ಲಿಂದು ಭಾರತ - ಶ್ರೀಲಂಕಾ ಮುಖಾಮುಖಿ

<><><><>

ಇಂದು ದೇಶಾದ್ಯಂತ ಸಂವಿಧಾನ ದಿನವನ್ನು ಆಚರಿಸಲಾಗುತ್ತಿದೆ. ೧೯೪೯ರ ನವೆಂಬರ್ ೨೬ರಂದು ಸಂವಿಧಾನ ಸಭೆಯು ಭಾರತದ ಸಂವಿಧಾನವನ್ನು ಅಂಗೀಕರಿಸಿದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ. ೨೦೧೫ರಿಂದ ಸಂವಿಧಾನದಲ್ಲಿ ಅಡಕವಾಗಿರುವ ತತ್ವಗಳು ಮತ್ತು ಮೌಲ್ಯಗಳನ್ನು ಸ್ಮರಿಸುವ ಹಾಗೂ ಅವುಗಳ ಕುರಿತು ಚಿಂತನೆ ನಡೆಸುವ ಉದ್ದೇಶದಿಂದ ಸಂವಿಧಾನ ದಿನವನ್ನು ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳು, ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳು, ಸ್ವಾಯತ್ತ ಸಂಸ್ಥೆಗಳು ಮತ್ತು ವಿವಿಧ ಸಂಘಟನೆಗಳ ವತಿಯಿಂದ ದೇಶಾದ್ಯಂತ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಎಲ್ಲ ಕಚೇರಿಗಳಲ್ಲಿ ಸಂವಿಧಾನ ಪೀಠಿಕೆ ಓದುವ ಮೂಲಕ ಸಂವಿಧಾನ ದಿನವನ್ನು ಆಚರಿಸಲಾಯಿತು.

<><><><>

ಸಂವಿಧಾನ ದಿನದ ಅಂಗವಾಗಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ದೇಶದ ಸಮಸ್ತ ಜನತೆಗೆ ಶುಭಾಶಯಗಳನ್ನು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಡಾ.

ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಸ್ಮರಿಸಿ ಗೌರವ ಸಲ್ಲಿಸಿದ್ದಾರೆ. ಜತೆಗೆ, ಸಂವಿಧಾನ ರಚನಾ ಸಭೆಯ ಗಣ್ಯ ಸದಸ್ಯರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಂವಿಧಾನ ರಚನೆಕಾರರ ದೂರದೃಷ್ಟಿ, ವಿವೇಕ ಮತ್ತು ಸಮರ್ಪಣಾ ಮನೋಭಾವ ನಮ್ಮ ಸಂವಿಧಾನದ ರೂಪುಗೊಳ್ಳುವಿಕೆಗೆ ಕಾರಣವಾಗಿದ್ದು, ಪ್ರಜಾಸತ್ತಾತ್ಮಕ ಗಣರಾಜ್ಯದ ಅಡಿಪಾಯವನ್ನು ಹಾಕಿದೆ ಎಂದು ಅವರು ಹೇಳಿದ್ದಾರೆ. ಜತೆಗೆ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಸಂವಿಧಾನಿಕ ಆದರ್ಶಗಳಿಗೆ ಬದ್ಧತೆಯನ್ನು ಪುನರುಚ್ಚರಿಸುವಂತೆ ನಾಗರಿಕರಿಗೆ ಕರೆ ನೀಡಿರುವ ಉಪರಾಷ್ಟ್ರಪತಿ, ಎಲ್ಲರನ್ನೂ ಒಳಗೊಂಡ ಮತ್ತು ಸಮೃದ್ಧ ಭಾರತ ನಿರ್ಮಾಣಕ್ಕೆ ಸಾಮೂಹಿಕವಾಗಿ ಶ್ರಮಿಸುವಂತೆ ಮನವಿ ಮಾಡಿದ್ದಾರೆ.

<><><><>

ಭಾರತೀಯ ಸಂವಿಧಾನದ ೭೭ನೇ ವಾರ್ಷಿಕೋತ್ಸವದ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶದ ಜನತೆಗೆ ಸಂವಿಧಾನ ದಿನದ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಸಂವಿಧಾನ ರಚನಾ ಸಭೆಯ ಎಲ್ಲ ಮಹನೀಯರಿಗೆ ಪ್ರಧಾನಿ ಗೌರವ ನಮನ ಸಲ್ಲಿಸಿದ್ದಾರೆ. ಸಂವಿಧಾನದ ರೂಪದಲ್ಲಿ ಅವರು ನಮಗೆ ನೀಡಿರುವ ಕೊಡುಗೆ ಭಾರತೀಯ ಪ್ರಜಾಪ್ರಭುತ್ವದ ಅಮೂಲ್ಯ ಪರಂಪರೆಯಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ದೇಶದ ನಾಗರಿಕರಿಗೆ ಸಂವಿಧಾನ ದಿನದ ಶುಭಾಶಯ ಕೋರಿದ್ದಾರೆ.

<><><><>

ಸಂವಿಧಾನ ದಿನಾಚರಣೆಯ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ವಿಧಾನಪರಿಷತ್ತಿನ ಸಭಾಪತೀ ಸಲೀಂ ಅಹ್ಮದ್, ಸಚಿವ ಕೆ.ಹೆಚ್. ಮುನಿಯಪ್ಪ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

<><><><>

೨೦೦೮ರ ನವೆಂಬರ್ ೨೬ರಂದು ಮುಂಬೈನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಅಮಾಯಕರು ಹಾಗೂ ಹುತಾತ್ಮರಾದ ಭದ್ರತಾ ಸಿಬ್ಬಂದಿಯನ್ನು ದೇಶ ಇಂದು

ಸ್ಮರಿಸುತ್ತಿದೆ. ಲಷ್ಕರ್-ಎ-ತೊಯ್ಬಾ ಸಂಘಟನೆಯ ೧೦ ಉಗ್ರರು ಮುಂಬೈನ ವಿವಿಧೆಡೆ ನಡೆಸಿದ ಸಂಘಟಿತ ದಾಳಿ ಸುಮಾರು ೬೦ ಗಂಟೆಗಳ ಕಾಲ ನಡೆದಿತ್ತು. ತಾಜ್ ಮಹಲ್ ಪ್ಯಾಲೇಸ್ ಹೋಟೆಲ್, ಒಬೆರಾಯ್ ಟ್ರೈಡೆಂಟ್, ಛತ್ರಪತಿ ಶಿವಾಜಿ ಟರ್ಮಿನಸ್ ಸೇರಿದಂತೆ ಪ್ರಮುಖ ಸ್ಥಳಗಳನ್ನು ಗುರಿಯಾಗಿಸಲಾಗಿತ್ತು. ದಾಳಿಯಲ್ಲಿ ೧೬೬ ಮಂದಿ ಮೃತಪಟ್ಟಿದ್ದು, ೩೦೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ೯ ಉಗ್ರರನ್ನು ಹತ್ಯೆ ಮಾಡಲಾಗಿತ್ತು. ಸೆರೆಸಿಕ್ಕ ಅಜ್ಮಲ್ ಕಸಬ್‌ನನ್ನು ನ್ಯಾಯಾಲಯ ದೋಷಿ ಎಂದು ಘೋಷಿಸಿ ಗಲ್ಲಿಗೇರಿಸಿತ್ತು. ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿಗೆ ಭಾರತ ಬದ್ಧವಾಗಿದ್ದು, ಈ ವರ್ಷ ಫೆಬ್ರವರಿಯಲ್ಲಿ ಸಮಗ್ರ ರಾಷ್ಟ್ರೀಯ ಭಯೋತ್ಪಾದನಾ ನಿಗ್ರಹ ನೀತಿ 'ಪ್ರಹಾರ್' ಅನ್ನು ಪ್ರಕಟಿಸಿದೆ.

<><><><>

೨೦೦೮ರಲ್ಲಿ ನಡೆದ ನವೆಂಬರ್ ೨೬ರ ಮುಂಬೈ ಭಯೋತ್ಪಾದಕ ದಾಳಿಯ ಸಂದರ್ಭದಲ್ಲಿ ಉಗ್ರರ ವಿರುದ್ಧ ಧೈರ್ಯದಿಂದ ಹೋರಾಡಿದ ವೀರ ಯೋಧರು, ಪೊಲೀಸ್ ಸಿಬ್ಬಂದಿ ಸೇರಿದಂತೆ ಎಲ್ಲರಿಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ರಾಷ್ಟ್ರಪತಿ ಅವರು, ಅವರ ತ್ಯಾಗ ಮತ್ತು ನಿಸ್ವಾರ್ಥ ಸೇವೆ ಸದಾ ದೇಶದ ಜನರ ಮನದಲ್ಲಿ ಅಚ್ಚಳಿಯದೆ ಉಳಿಯಲಿದೆ ಎಂದು ಹೇಳಿದ್ದಾರೆ. ಭಯೋತ್ಪಾದನೆಯು ಜೀವಗಳನ್ನು ನಾಶಪಡಿಸಬಹುದೇ ಹೊರತು, ಧೈರ್ಯ, ಸಹಾನುಭೂತಿ ಮತ್ತು ದೃಢಸಂಕಲ್ಪದಿಂದ ಒಗ್ಗಟ್ಟಾಗಿರುವ ರಾಷ್ಟ್ರದ ಮನೋಬಲವನ್ನು ಕುಗ್ಗಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

<><><><>

೨೦೦೮ರ ನವೆಂಬರ್ ೨೬ರಂದು ನಡೆದ ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಅಮಾಯಕ ನಾಗರಿಕರಿಗೆ ಹಾಗೂ ಉಗ್ರರ ವಿರುದ್ಧ ಹೋರಾಡಿದ ಧೀರ ಭದ್ರತಾ ಸಿಬ್ಬಂದಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಭದ್ರತಾ ಸಿಬ್ಬಂದಿಯ ಅಪ್ರತಿಮ ಸಾಹಸ ಮತ್ತು ಪರಮ ತ್ಯಾಗವನ್ನು ಸ್ಮರಿಸಿ, ಅವರಿಗೆ ನಮನ ಸಲ್ಲಿಸಿದ್ದಾರೆ. ಎಲ್ಲಾ ಸ್ವರೂಪದ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಗೆ ಭಾರತ ಬದ್ಧವಾಗಿದ್ದು, ದಾಳಿಗೆ ಹೊಣೆಗಾರರಾದವರನ್ನು ನ್ಯಾಯದ ಕಟಕಟೆಗೆ ತರುವ ಸಂಕಲ್ಪ ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಗೋವಾದಲ್ಲಿ ನಡೆಯುತ್ತಿರುವ ೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ೭ನೇ ದಿನದ ಕಾರ್ಯಕ್ರಮಗಳು ಇಂದು ಉತ್ಸಾಹದಿಂದ ಆರಂಭಗೊಂಡಿದ್ದು, ರಿಷಬ್ ಶೆಟ್ಟಿ ನಿರ್ದೇಶಿಸಿ, ನಟಿಸಿರುವ ಬಹುನಿರೀಕ್ಷಿತ ಕನ್ನಡ ಚಿತ್ರ 'ಕಾಂತಾರ: ಎ ಲೆಜೆಂಡ್ - ಅಧ್ಯಾಯ ೧' ಇಂದು ಬೆಳಿಗ್ಗೆ ಅಂತಾರಾಷ್ಟ್ರೀಯ ಸ್ಪರ್ಧಾ ವಿಭಾಗದಲ್ಲಿ ಪ್ರದರ್ಶನಗೊಳ್ಳುತ್ತಿದೆ. ಅದ್ಭುತ ದೃಶ್ಯ ವೈಭವ, ಸ್ಥಳೀಯ ಸಂಪ್ರದಾಯಗಳು ಹಾಗೂ ಸಾಹಸಮಯ ಸನ್ನಿವೇಶಗಳ ಸಮ್ಮಿಲನದೊಂದಿಗೆ, ಈ ಚಿತ್ರ ಭಾರತದ ಪ್ರಾದೇಶಿಕ ಚಿತ್ರರಂಗದ ವಿಶಿಷ್ಟ ಸಾಂಸ್ಕೃತಿಕ ಕಥನವನ್ನು ಅಂತರರಾಷ್ಟ್ರೀಯ ವೇದಿಕೆಗೆ ಪರಿಚಯಿಸುತ್ತಿದೆ. ವಿಶ್ವದ ವಿವಿಧ ದೇಶಗಳ ಚಿತ್ರಗಳೊಂದಿಗೆ 'ಕಾಂತಾರ: ಎ ಲೆಜೆಂಡ್ ಅಧ್ಯಾಯ ೧' ಅಂತಾರಾಷ್ಟ್ರೀಯ ಸ್ಪರ್ಧೆಯಲ್ಲಿ ಪಾಲ್ಗೊಂಡಿರುವುದು, ಸ್ಥಳೀಯ ನೆಲೆಗಟ್ಟಿನ ಕಥೆಗಳು ಚಿತ್ರಮಾಧ್ಯಮದ ಮೂಲಕ ಜಾಗತಿಕ ಪ್ರೇಕ್ಷಕರ ಮನಗೆಲ್ಲಬಲ್ಲವು ಎಂಬುದನ್ನು ಮತ್ತೊಮ್ಮೆ ಸಾರಿದೆ.

<><><><>

ಅಮೆರಿಕವು ಚೀನಾ, ಯುರೋಪಿಯನ್ ಒಕ್ಕೂಟ ಮತ್ತು ಭಾರತ ಸೇರಿದಂತೆ ೧೪ ದೇಶಗಳಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇಕಡ ೧೫ರಿಂದ ೫೫ರವರೆಗೆ ಹೊಸ ಸುಂಕ ವಿಧಿಸುವ ಪ್ರಸ್ತಾವನೆ ಮುಂದಿಟ್ಟಿದೆ. ವಾಷಿಂಗ್ಟನ್‌ನಲ್ಲಿರುವ ಅಮೆರಿಕದ ನೀತಿಗಳು ದೇಶೀಯ ಉತ್ಪಾದಕರಿಗೆ ಅನನುಕೂಲ ಉಂಟುಮಾಡುತ್ತಿದ್ದು, ದೇಶದ ಕೈಗಾರಿಕಾ ನೆಲೆಯನ್ನು ದುರ್ಬಲಗೊಳಿಸುತ್ತಿವೆ ಎಂದು ಅಮೆರಿಕ ಭಾವಿಸಿರುವ ಹಿನ್ನೆಲೆಯಲ್ಲಿ ಈ ಕ್ರಮಗಳನ್ನು ಪ್ರಸ್ತಾಪಿಸಲಾಗಿದೆ ಎಂದು ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ತಿಳಿಸಿದ್ದಾರೆ. ಭಾರತದ ವಿಷಯದಲ್ಲಿ, ಈಗಾಗಲೇ ಜಾರಿಯಲ್ಲಿರುವ ಸೆಕ್ಷನ್ ೩೦೧ರ ಅಡಿಯಲ್ಲಿ ವಿಧಿಸಿರುವ ಸುಂಕಗಳನ್ನು ಪರಿಗಣಿಸಿದ ಬಳಿಕ, ಕೆಲವು ಉತ್ಪನ್ನಗಳಿಗೆ ವಿನಾಯಿತಿ ನೀಡಿ, ಇತರ ಸರಕುಗಳ ಮೇಲೆ ಗರಿಷ್ಠ ಶೇಕಡ ೨೫ರಷ್ಟು ಸುಂಕ ವಿಧಿಸಲು ಅಮೆರಿಕದ ವ್ಯಾಪಾರ ಪ್ರತಿನಿಧಿ ಕಚೇರಿ ಪ್ರಸ್ತಾಪಿಸಿದೆ.

<><><><>

ರಾಷ್ಟ್ರ ರಾಜಧಾನಿ ದೆಹಲಿ, ಹರಿಯಾಣ, ಚಂಡೀಗಢ, ಪಂಜಾಬ್, ಹಿಮಾಚಲ ಪ್ರದೇಶ, ಒಡಿಶಾ ಹಾಗೂ ಈಶಾನ್ಯ ಭಾಗದ ಕೆಲವು ಪ್ರದೇಶಗಳಲ್ಲಿ ಇಂದು ದಟ್ಟ ಮಂಜು ಆವರಿಸುವ ಸಾಧ್ಯತೆ ಇದೆ

ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ, ಮುಂದಿನ ಎರಡು ದಿನಗಳ ಕಾಲ ಕೇರಳ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್ ಪ್ರದೇಶಗಳಲ್ಲಿ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ. ಆಂಧ್ರಪ್ರದೇಶ ಮತ್ತು ದಕ್ಷಿಣ ಒಳನಾಡು ಕರ್ನಾಟಕದಲ್ಲಿಯೂ ಇಂದು ಗುಡುಗು ಸಹಿತ ಮಳೆ ಸುರಿಯುವ ಸಾಧ್ಯತೆಯಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

<><><><>

ದೋಹಾದಲ್ಲಿ ನಡೆಯುತ್ತಿರುವ ಪುರುಷರ ಏಷ್ಯಾಕಪ್ ರೈಸಿಂಗ್ ಸ್ಟಾರ್ಸ್ ಕ್ರಿಕೆಟ್ ಟೂರ್ನಿಯ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಇಂದು ಭಾರತ ಎ ಮತ್ತು ಶ್ರೀಲಂಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಹಿಂದಿನ ಪಂದ್ಯದಲ್ಲಿ ಯುಎಇ ವಿರುದ್ಧ ಅತಿ ವೇಗದ ದ್ವಿಶತಕ ಗಳಿಸಿ ವಿಶ್ವ ದಾಖಲೆ ನಿರ್ಮಿಸಿರುವ ಟೀಮ್ ಇಂಡಿಯಾ ಆಟಗಾರ ವೈಭವ್ ಸೂರ್ಯವಂಶಿ, ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದಾರೆ. ನಾಳೆ ಎರಡನೇ ಸೆಮಿಫೈನಲ್ ನಲ್ಲಿ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳು ಎದುರಾಗಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>